C.W.7 , P.W. 6

## ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕಾರವಾರ

## ಸಿ.ಸಿ. ನಂ. 1946/2025

ಸಿ.ಡಬ್ಲ್ಯು 7

ಪಿ.ಡಬ್ಲ್ಯು 6

| | | |
|---|---|---|
| ಸಾಕ್ಷಿದಾರರ ಹೆಸರು | – | ಆಯಿಷಾ ರಿತ್ತಿ |
| ಗಂಡನ ಹೆಸರು | – | ಹಸನಸಾಬ್ |
| ವಯಸ್ಸು | – | 42 ವರ್ಷ |
| ಉದ್ಯೋಗ | – | ಮನೆ ಕೆಲಸ |
| ವಾಸ್ತವ್ಯ | – | ಮುಂಡಗೋಡ |

(ಇಂದು ದಿನಾಂಕಃ 22-07-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ**

ಗಲಾಟೆಯನ್ನು ನೋಡಿಲ್ಲ. ಚಾಸಾ 1 ರ ಪರಿಚಯ ಇಲ್ಲ . ಪೋಲಿಸರ ಮುಂದೆ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸದ್ರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಮಾನ್ಯ ಹಿರಿಯ ಸ.ಸ.ಅ. ರವರು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಹಿರಿಯ ಸ.ಸ.ಅ. ರವರಿಂದಃ**

ನಾನು 2025 ರಲ್ಲಿ ಚಾಸಾ 5 ರವರಿಂದ ಬಾಡಿಗೆ ಮನೆ ಪಡೆದು ಸದರಿ ಮನೆಯಲ್ಲಿ ವಾಸವಾಗಿದ್ದೆ ಎಂದರೆ ಸರಿ . ದಿನಾಂಕ 20-02-2025 ರಂದು ನಾನು ಮನೆಯಲ್ಲಿ ಇದ್ದಾಗ ಮನೆ ರಿಪೇರಿಗೆಂದು ಚಾಸಾ 1 ಆಳುಗಳನ್ನು ಕರೆದುಕೊಂಡು ಬಂದಿದ್ದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಆರೋಪಿ ನಂ. 1 ಮತ್ತು 2 ಬಂದು ಗಲಾಟೆ ಮಾಡಿ 2 ನೇ ಆರೋಪಿ ಚಾಸಾ 1 ಇವರಿಗೆ ಕಬ್ಬಿಣದ

C.W.7 , P.W. 6

ಸಲಾಕೆಯಿಂದ ಹಲ್ಲೆ ಮಾಡಿದ್ದಾರೆ ಎಂದರೆ ಸರಿಯಲ್ಲ. ದಿ 15-03-2025 ರಂದು ನಾನು ------ ಸಹಿ ಮಾಡಿರುತ್ತೇನೆ ಎಂದು ಈಗ ಓದಿ ಹೇಳಿದಂತೆ ಪೋಲಿಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು . ಎಲ್ಲಾ ವಿಷಯಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಹಾಜರಿದ್ದು** ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಮುಖ್ಯ ನ್ಯಾಯಿಕ ದಂ. ಕಾರವಾರ